**Akashvani : Bangalore**
**National Bulletin In Kannada**
**12.03.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.03.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಮಾರಿಷಸ್‌ನಲ್ಲಿಂದು ನಡೆಯಲಿರುವ ರಾಷ್ಟ್ರೀಯ ದಿನಾಚರಣೆ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೨. ೨೦೨೪-೨೫ ನೇ ಸಾಲಿನ ಪೂರಕ ಅಂದಾಜುಗಳಿಗೆ ಲೋಕಸಭೆ ಅನುಮೋದನೆ; ಪ್ರಸಕ್ತ ಸಾಲಿನ ಮಣಿಪುರದ ಬಜೆಟ್‌ಗೆ ಒಪ್ಪಿಗೆ

೩. ಪಾಕಿಸ್ತಾನದಲ್ಲಿ ಪೇಶಾವರ ಮೂಲದ ರೈಲಿನ ಮೇಲೆ ಭಯೋತ್ಪಾದಕರ ದಾಳಿ; ಘಟನೆಯ ಹೊಣೆ ಹೊತ್ತ ಬಲೂಚ್ ಲಿಬರೇಷನ್ ಆರ್ಮಿ

೪. ಜಮ್ಮು-ಕಾಶ್ಮೀರದ ಗುಲ್ಮಾರ್ಗ್‌ನಲ್ಲಿ ನಡೆಯುತ್ತಿರುವ ಎರಡನೇ ಹಂತದ ಖೇಲೋ ಇಂಡಿಯಾ ಚಳಿಗಾಲದ ಪಂದ್ಯಾವಳಿಗೆ ಇಂದು ತೆರೆ

**<><*<><>*><>**

ಮಾರಿಷಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅಲ್ಲಿನ ರಾಷ್ಟ್ರೀಯ ದಿನಾಚರಣೆ ಸಮಾರಂಭದಲ್ಲಿಂದು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸುತ್ತಿರುವುದು ಇದು ಎರಡನೇ ಬಾರಿಯಾಗಿದೆ. ಭಾರತೀಯ ವಾಯು ಸೇನಾಪಡೆಯ ಆಕಾಶ ಗಂಗಾ ಸ್ಕೈ ಡೈವಿಂಗ್ ತಂಡ, ಭಾರತೀಯ ನೌಕಾಪಡೆಯ ಇಂಫಾಲ್ ನೇವಲ್‌ಶಿಪ್ ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿವೆ. ಪ್ರಧಾನಿ ಅವರು, ನಿನ್ನೆ ಮಾರಿಷಸ್‌ನ ಸಹವರ್ತಿ ನವೀನ್‌ಚಂದ್ರ ರಾಮ್ ಗೂಲಂ ಅವರನ್ನು ಪೋರ್ಟ್ ಲೂಹಿಸ್‌ನಲ್ಲಿ ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪ್ರಕಟಿಸಿದರು. ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಕುರಿತು ನಾಯಕರು ಪರಾಮರ್ಶೆ ನಡೆಸಿದರು. ಮುಂಬರುವ ದಿನಗಳಲ್ಲಿ ಉಭಯ ದೇಶಗಳ ನಡುವಿನ ಸಂಬಂಧಗಳನ್ನು ಮತ್ತಷ್ಟು ಉತ್ತುಂಗ ಸ್ಥಾನಕ್ಕೆ ಕೊಂಡೊಯ್ಯುವ ಬಗೆಗಿನ ಮಾಗೋಪಾಯಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ರಕ್ಷಣಾ, ಭದ್ರತೆ, ಆರ್ಥಿಕ ಸಂಬಂಧಗಳು ಮತ್ತು ಸಾಂಸ್ಕೃತಿಕ ವಿನಿಮಯ ಸೇರಿದಂತೆ ವಿವಿಧ ವಲಯಗಳಲ್ಲಿ ಸಂಬಂಧಗಳ ವೃದ್ಧಿ ಕುರಿತು ನಾಯಕರು ಚರ್ಚಿಸಿದರು. ಮಾರಿಷಸ್‌ನ ಅಭಿವೃದ್ಧಿಯಲ್ಲಿ ಭಾರತ ಮೌಲ್ಯಯುತ ಮತ್ತು ನಂಬಿಕಸ್ಥ ಪಾಲುದಾರ ರಾಷ್ಟ್ರವಾಗಿ ಮುಂದುವರಿಯಲಿದೆ ಎಂದು ಪ್ರಧಾನಿ ತಿಳಿಸಿದರು. ಜಗತ್ತಿನ ದಕ್ಷಿಣ ವಲಯದಲ್ಲಿನ ಹಿತಾಸಕ್ತಿಗಳ ರಕ್ಷಣೆಗೆ ಉಭಯ ದೇಶಗಳು ಒಟ್ಟಾಗಿ ಶ್ರಮಿಸಲಿವೆ ಎಂದು ಪ್ರಧಾನಿ

ನರೇಂದ್ರ ಮೋದಿ ಹೇಳಿದರು. ಬಳಿಕ ಮಾರಿಷಸ್‌ನ ಪ್ರಧಾನಿ ನವೀನ್‌ಚಂದ್ರ ರಾಮ್ ಗೂಲಂ ಏರ್ಪಡಿಸಿದ್ದ ಔತಣಕೂಟದಲ್ಲಿ ಪಾಲ್ಗೊಂಡಿದ್ದ ಪ್ರಧಾನಿ ನರೇಂದ್ರ ಮೋದಿ ಭಾರತ ಮತ್ತು ಮಾರಿಷಸ್ ಪಾಲುದಾರಿಕೆ ನಮ್ಮ ಐತಿಹಾಸಿಕ ಸಂಬಂಧಗಳಿಗೆ ಮಾತ್ರ ಸೀಮಿತವಾಗಿರುವುದಿಲ್ಲ. ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಮೌಲ್ಯಯುತ ಮತ್ತು ಪರಸ್ಪರ ನಂಬಿಕೆಯ ಹಾಗೂ ಸಮಾನ ದೃಷ್ಟಿಕೋನಗಳಲ್ಲಿ ಸಂಬಂಧ ವೃದ್ಧಿಗೆ ಶ್ರಮಿಸಲಾಗುವುದು ಎಂದು ತಿಳಿಸಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಮಾರಿಷಸ್ ಅಧ್ಯಕ್ಷ ಧರಮ್ ಗೋಖೂಲ್ ಅವರನ್ನು ಪೋರ್ಟ್ ಲೂಹಿಸ್‌ನಲ್ಲಿ ಭೇಟಿ ಮಾಡಿ, ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧ ವೃದ್ಧಿ ಕುರಿತು ಮಾತುಕತೆ ನಡೆಸಿದರು. ಭಾರತದ ಸಂಸ್ಕೃತಿ ಮತ್ತು ಪರಂಪರಾಗತ ಕೃಷಿಯನ್ನು ಬಿಂಬಿಸುವ ಉಡುಗೆರೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು, ಮಾರಿಷಸ್ ಅಧ್ಯಕ್ಷರಿಗೆ ನೀಡಿದರು.  ಈ ನಡುವೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾರಿಷಸ್‌ನ ಅತ್ಯುನ್ನತ ನಾಗರಿಕ ಪ್ರಶಸ್ತಿ 'ಗ್ರ್ಯಾಂಡ್ ಕಮಾಂಡರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಅಂಡ್ ಕೀ ಆಫ್ ಇಂಡಿಯನ್ ಓಷಿಯನ್' ನೀಡಲು ನಿರ್ಧರಿಸಿರುವುದಾಗಿ ಮಾರಿಷಸ್ ಪ್ರಧಾನಿ ಡಾ.ನವೀನ್‌ಚಂದ್ರ ರಾಮಗೂಲಂ ಘೋಷಿಸಿದ್ದಾರೆ. ಈ ಮೂಲಕ ಪ್ರಧಾನಿ ನರೇಂದ್ರ ಮೋದಿ ಈ ಪ್ರಶಸ್ತಿ ಪಡೆದ ಮೊದಲ ಭಾರತೀಯರಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ದ್ವೀಪ ರಾಷ್ಟ್ರಕ್ಕೆ ಎರಡು ದಿನಗಳ ಭೇಟಿಗಾಗಿ ನಿನ್ನೆ ಬೆಳಗ್ಗೆ ಪೋರ್ಟ್ ಲೂಯಿಸ್‌ಗೆ ತಲುಪಿದ್ದರು.

**<><*<><>*><>**

೨೦೨೪-೨೫ ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಪಟ್ಟಿಗೆ ಲೋಕಸಭೆಯಲ್ಲಿ ನಿನ್ನೆ ಅನುಮೋದನೆ ನೀಡಲಾಗಿದೆ.  ೨೦೨೫-೨೬ನೇ ಸಾಲಿನ ಮಣಿಪುರದ ಆಯ-ವ್ಯಯ ಹಾಗೂ ೨೦೨೪-೨೫ ನೇ ಸಾಲಿನ ಮಣಿಪುರದ ಪೂರಕ ಅಂದಾಜುಗಳಿಗೂ ಒಪ್ಪಿಗೆ ಸೂಚಿಸಲಾಗಿದೆ. ಈ ಕುರಿತು ನಡೆದ ಚರ್ಚೆಗೆ ಉತ್ತರಿಸಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಣಿಪುರದ ಆರ್ಥಿಕತೆ ಶೀಘ್ರಗತಿಯಲ್ಲಿ ಸಹಜ ಸ್ಥಿತಿಗೆ ಬರಲು ಕೇಂದ್ರ ಸರ್ಕಾರ ಎಲ್ಲಾ ರೀತಿಯ ಆರ್ಥಿಕ ನೆರವು ನೀಡಲಿದೆ ಎಂದು ಭರವಸೆ ನೀಡಿದರು. ಮಣಿಪುರ ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ೫೦೦ ಕೋಟಿ ರೂಪಾಯಿಗಳ ಆವರ್ತ ನಿಧಿಯನ್ನು ಸ್ಥಾಪನೆ ಮಾಡಲಾಗುವುದು. ಈ ರೀತಿಯ ನಿಧಿಯನ್ನ ಹಿಂದೆಂದೂ ರಾಜ್ಯಕ್ಕೆ ನೀಡಿರಲಿಲ್ಲ ಎಂದು ಸಚಿವರು ತಿಳಿಸಿದರು. ಪರಿಹಾರ ಶಿಬಿರಗಳಿಗಾಗಿ ಕೇಂದ್ರ ಗೃಹ ಸಚಿವಾಲಯದ ಅಡಿಯಲ್ಲಿ ೪೦೦ ಕೋಟಿ ರೂಪಾಯಿಗಳ ವಿಶೇಷ ಪ್ಯಾಕೇಜ್ ನೀಡಲು ತೀರ್ಮಾನಿಸಿರುವುದಾಗಿ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

**<><*<><>*><>**

೨೦೨೪ರ ಏಪ್ರಿಲ್‌ನಿಂದ ಡಿಸೆಂಬರ್ ಅವಧಿಯಲ್ಲಿ ದೇಶಕ್ಕೆ ಆಮದು ಮಾಡಿಕೊಳ್ಳಲಾದ ಕಲ್ಲಿದ್ದಲು ಪ್ರಮಾಣ ಶೇಕಡ ೮.೪ ರಷ್ಟು ಕಡಿಮೆಯಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತಂತೆ ಹೇಳಿಕೆ ಬಿಡುಗಡೆ ಮಾಡಿರುವ ಕೇಂದ್ರ ಕಲ್ಲಿದ್ದಲು ಸಚಿವಾಲಯ, ೨೦೨೪ರ ಏಪ್ರಿಲ್‌ನಿಂದ ಡಿಸೆಂಬರ್ ಅವಧಿಯಲ್ಲಿ ೧೮೦.೪೨ ದಶಲಕ್ಷ ಟನ್ ಕಲ್ಲಿದ್ದಲು ಆಮದು ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದೆ. ಹಿಂದಿನ ಹಣಕಾಸು ವರ್ಷದ ಇದೇ ಅವಧಿಯಲ್ಲಿ ೨೦೦.೧೯ ದಶಲಕ್ಷ ಟನ್ ಕಲ್ಲಿದ್ದಲು ಆಮದು ಮಾಡಿಕೊಳ್ಳಲಾಗಿತ್ತು. ಈ ಕಡಿತದಿಂದ ಸುಮಾರು ೪೨ ಸಾವಿರದ ೬೦೦ ಕೋಟಿ ರೂಪಾಯಿ ವಿದೇಶಿ ವಿನಿಮಯ ಉಳಿತಾಯವಾಗಿದೆ ಎಂದು ಹೇಳಿಕೆಯಲ್ಲಿ ಮಾಹಿತಿ ನೀಡಲಾಗಿದೆ.

<><*<><>*><>

ಪಂಜಾಬ್ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದು ಚಂಡೀಗಢದಲ್ಲಿರುವ ಪಂಜಾಬ್ ವಿಶ್ವವಿದ್ಯಾಲಯದ ೭೨ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಈ ವೇಳೆ ಅವರು, ವಿದ್ಯಾರ್ಥಿಗಳಿಗೆ ಪದವಿ ಹಾಗೂ ಪದಕಗಳನ್ನು ಪ್ರದಾನ ಮಾಡಲಿದ್ದಾರೆ. ಬಳಿಕ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಿಬ್ಬಂದಿಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ರಾಷ್ಟ್ರಪತಿಗಳ ಭೇಟಿಗಾಗಿ ವಿಶ್ವವಿದ್ಯಾಲಯದ ಕ್ಯಾಂಪಸ್ ಹಾಗೂ ಸುತ್ತಮುತ್ತಲು ಬಿಗಿಬಂದೋಬಸ್ತ್ ಮಾಡಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಿನ್ನೆ ಪಂಜಾಬ್ ಭಟಿಂಡಾದ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ_ ಏಮ್ಸ್‌ನ ಮೊದಲನೇ ಘಟಿಕೋತ್ಸವವನ್ನುದ್ದೇಶಿಸಿ ಮಾತನಾಡಿ, ಆರೋಗ್ಯವಂತ ಸಮಾಜ ನಿರ್ಮಾಣದಲ್ಲಿ ವೈದ್ಯರ ಹಾಗೂ ಸಂಶೋಧಕರ ಪಾತ್ರ ಪ್ರಮುಖವಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು. ಮಾದಕ ವ್ಯಸನದಿಂದ ಉಂಟಾಗುವ ದೈಹಿಕ ಮತ್ತು ಮಾನಸಿಕ ತೊಂದರೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು. ಈ ಕುರಿತಂತೆ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಸಂಸ್ಥೆಗಳ ಸಹಯೋಗದೊಂದಿಗೆ ಸಾರ್ವಜನಿಕರ ಜಾಗೃತಿ ಅಭಿಯಾನ ನಡೆಸುವಂತೆ ರಾಷ್ಟ್ರಪತಿ ಸಲಹೆ ಮಾಡಿದರು.

<><*<><>*><>

ಪಾಕಿಸ್ತಾನದಲ್ಲಿ ಪ್ರತ್ಯೇಕತಾವಾದಿಗಳ ಉಪಟಳ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಬಲುಚಿಸ್ತಾನ ಪ್ರಾಂತ್ಯದಲ್ಲಿ ಭಯೋತ್ಪಾದಕರು ಪೇಶಾವರ ಮೂಲದ ರೈಲಿನ ಮೇಲೆ ನಿನ್ನೆ ದಾಳಿ ನಡೆಸಿ ಸುಮಾರು ೪೫೦ ಪ್ರಯಾಣಿಕರನ್ನು ಅಪಹರಿಸಿದ್ದಾರೆ.  ನಂತರ ಭಯೋತ್ಪಾದಕರು ಅಪಹರಿಸಿದ್ದ ನಾಗರಿಕರನ್ನು ಬಿಡುಗಡೆ ಮಾಡಿದ್ದು, ಸೇನಾ ಸಿಬ್ಬಂದಿಯನ್ನು ಒಳಗೊಂಡತೆ ೨೧೪ ಜನರನ್ನು ತಮ್ಮ ವಶದಲ್ಲಿಟ್ಟುಕೊಂಡಿದ್ದಾರೆ. ಈ ಘಟನೆಗೆ ತಾನೇ ಹೊಣೆ ಎಂದು ಬಲೂಚ್ ಲಿಬರೇಷನ್ ಆರ್ಮಿ- ಬಿಎಲ್‌ಎ ಭಯೋತ್ಪಾದಕ ಸಂಘಟನೆ ಘೋಷಿಸಿದೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಬಿಎಲ್‌ಎ, ಈ ದಾಳಿಯಲ್ಲಿ  ೩೦ ಕ್ಕೂ ಹೆಚ್ಚು ಸೇನಾ ಸಿಬ್ಬಂದಿಯನ್ನು ಹತ್ಯೆಗೈದಿರುವುದಾಗಿ ಹೇಳಿಕೊಂಡಿದೆ. ರೈಲು ಕ್ವೆಟ್ಟಾದಿಂದ ಪೇಶಾವರದತ್ತ ಸಂಚರಿಸುತ್ತಿತ್ತು. ಸುದ್ದಿ ತಿಳಿದ ಕೂಡಲೇ ಭದ್ರತಾ ಪಡೆಗಳು ಮತ್ತು ಪರಿಹಾರ ತಂಡಗಳು ಸ್ಥಳಕ್ಕೆ ದಾವಿಸಿದ್ದು, ಭಯೋತ್ಪಾದಕರ ವಿರುದ್ಧ ಕಾರ್ಯಾಚರಣೆಯಲ್ಲಿ ತೊಡಗಿವೆ.

<><*<><>*><>

ನವದೆಹಲಿಯ ಜವಹರ್‌ಲಾಲ್ ಕ್ರೀಡಾಂಗಣದಲ್ಲಿ ನಿನ್ನೆ ಭಾರತದ ಮೊಟ್ಟಮೊದಲ ವಿಶ್ವ ಪ್ಯಾರ ಅಥ್ಲೆಟಿಕ್ ಗ್ರ್ಯಾಂಡ್‌ಪ್ರಿಕ್ಸ್‌ಗೆ ಚಾಲನೆ ದೊರೆತಿದೆ. ಮೂರು ದಿನಗಳ ಈ ಕ್ರೀಡಾಕೂಟ ೯೦ ಕ್ಕೂ ಹೆಚ್ಚು ಸ್ಪರ್ಧೆಗಳನ್ನೊಳಗೊಂಡಿದ್ದು, ಜಗತ್ತಿನ ಅಗ್ರ ಪ್ಯಾರಾ ಅಥ್ಲೀಟ್‌ಗಳನ್ನು ಒಟ್ಟುಗೂಡಿಸಲಿದೆ. ಭಾರತ ಈ ಕ್ರೀಡಾಕೂಟಕ್ಕಾಗಿ ೧೪೫ ಕ್ರೀಡಾಪಟುಗಳ ತಂಡವನ್ನು ಕಣಕ್ಕಿಳಿಸಿದೆ. ಭಾರತ ತಂಡದಲ್ಲಿ ಪ್ಯಾರಾಲಿಂಪಿಕ್ ಚಿನ್ನದ ಪದಕ ವಿಜೇತರಾದ ಪ್ರವೀಣ್, ನವದೀಪ್, ಧರಮ್‌ಬೀರ್ ಸೇರಿದ್ದಾರೆ. ಇದೇ ೧೩ರವರೆಗೆ ನಡೆಯಲಿರುವ ಕ್ರೀಡಾಕೂಟ ೧೯ ದೇಶಗಳ ೧೦೫ ಪ್ಯಾರಾ ಅಥ್ಲೀಟಿಕ್‌ಗಳ ಭಾಗವಹಿಸುವಿಕೆಗೆ ಸಾಕ್ಷಿಯಾಗಿದೆ. ಸೌದಿ ಅರೇಬಿಯಾ, ಜರ್ಮನಿಕ, ಕಜಕಿಸ್ತಾನ್, ಉಜ್ಬೇಕಿಸ್ತಾನ್, ಫಿಲಿಪೈನ್ಸ್, ಜಪಾನ್, ಆಸ್ಟ್ರೇಲಿಯಾ, ಬ್ರೆಜಿಲ್, ನೇಪಾಳ, ಭೂತಾನ್ ಮತ್ತು ಶ್ರೀಲಂಕಾ ಸೇರಿದಂತೆ ಹಲವು ಅಂತಾರಾಷ್ಟ್ರೀಯ ತಂಡಗಳು ಕ್ರೀಡಾಕೂಟದಲ್ಲಿ ಸ್ಪರ್ಧಿಸುತ್ತಿವೆ.  ದುಬೈನಲ್ಲಿ ಇತ್ತೀಚಿಗೆ

ಮುಕ್ತಾಯಗೊಂಡ ಫಾಸಾ ಪ್ಯಾರಾ ಅಥ್ಲೆಟಿಕ್ಸ್ ಗ್ರ್ಯಾಂಡ್‌ಪ್ರಿಕ್ಸ್‌ನಲ್ಲಿ ೨೧ ಪದಕಗಳನ್ನು ಪಡೆದುಕೊಂಡ ಯುಎಇ ತಂಡ ಪ್ರಬಲ ಪೈಪೋಟಿ ನೀಡಲು ಸಜ್ಜಾಗಿದೆ.

<><*<><>*><>

ಜಮ್ಮು-ಕಾಶ್ಮೀರದ ಬಾರಾಮುಲ್ಲ ಜಿಲ್ಲೆಯ ಗುಲ್ಮಾರ್ಗ್‌ನಲ್ಲಿ ನಡೆಯುತ್ತಿರುವ ಎರಡನೇ ಹಂತದ ಖೇಲೋ ಇಂಡಿಯಾ ಚಳಿಗಾಲದ ಪಂದ್ಯಾವಳಿಗೆ ಇಂದು ತೆರೆ ಬೀಳಲಿದೆ. ಜನವರಿ ೨೩ ರಿಂದ ೨೭ರವರೆಗೆ ಪಂದ್ಯಾವಳಿಯ ಮೊದಲ ಹಂತ ಲಡಾಖ್‌ನಲ್ಲಿ ಯಶಸ್ವಿಯಾಗಿ ನಡೆದಿತ್ತು. ಎನ್‌ಡಿಎಸ್ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಮತ್ತು ಗುಪ್ಪುಕ್ ಪಾಂಡ್‌ನಲ್ಲಿ ಕ್ರಮವಾಗಿ ಐಸ್ ಹಾಕಿ ಮತ್ತು ಐಸಿ ಸ್ಕೇಟಿಂಗ್ ಸ್ಪರ್ಧೆಗಳು ನಡೆದಿದ್ದವು.

<><*<><>*><>

ಕೇಂದ್ರ ಸರ್ಕಾರ 'ಉಜಾಲಾ ಯೋಜನೆ'ಯಡಿ ದೇಶಾದ್ಯಂತ ಈವರೆಗೆ ಸುಮಾರು ೩೭ ಕೋಟಿ ಎಲ್‌ಇಡಿ ಬಲ್ಬ್‌ಗಳನ್ನು ವಿತರಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ. ರಾಜ್ಯಸಭೆಯಲ್ಲಿ ನಿನ್ನೆ ಸದಸ್ಯರೊಬ್ಬರ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಖಟ್ಟರ್, ಈ ಯೋಜನೆಯಿಂದಾಗಿ ಪ್ರತಿವರ್ಷಕ್ಕೆ ಗಂಟೆಗೆ ೪೮ ಶತಕೋಟಿ ಕಿಲೋವ್ಯಾಟ್ ಇಂಧನ ಉಳಿಕೆಯಾಗಿದೆ. ಎಲ್‌ಇಡಿ ಉತ್ಪನ್ನಗಳು ಅತ್ಯಲ್ಪ ವಿಷಕಾರಿ ವಸ್ತುಗಳನ್ನು ಹೊಂದಿರುತ್ತವೆ. ಹಾಗಾಗಿ ಇವುಗಳನ್ನು ವಿಲೇವಾರಿ ಮಾಡುವುದು ಸುಲಭವಾಗಿದ್ದು, ಪರಿಸರ ಮಾಲಿನ್ಯ ತಡೆಗೂ ಕೊಡುಗೆ ನೀಡುತ್ತವೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಮುಂಬೈನ ಬ್ರಬೋರ್ನ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಮುಂಬೈ ಇಂಡಿಯನ್ಸ್ ವಿರುದ್ಧ ೧೧ ರನ್‌ಗಳ ಅಂತರದ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ, ಆರ್‌ಸಿಬಿ, ಮುಂಬೈ ಇಂಡಿಯನ್ಸ್ ಪಾಯಿಂಟ್ಸ್ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರುವುದನ್ನು ತಡೆಯಿತು. ಮುಂಬೈ ಇಂಡಿಯನ್ಸ್ ನಾಳೆ ಗುಜರಾತ್ ಜೈಂಟ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯದಲ್ಲಿ ವಿಜೇತರಾದವರು ಫೈನಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡದ ವಿರುದ್ಧ ಸೆಣಸಲಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>